ಹರಿಸುತ್ತೇವೆ. ಬೆಂಗಳೂರಿನಿಂದ ಒಂದು ಗಣಿಗಾರಿಕೆಯನ್ನು ಮಾಡುತ್ತಿದ್ದಾರೆಂದು ಹೇಳಿದ್ದಾರೆ. ಇದು ಬೆಂಗಳೂರಿಗೆ ಮಾತ್ರ ಸೀಮಿತವಾಗಿಲ್ಲ, ಹೊರರಾಜ್ಯದ ಹಲವಾರು ಜನರು ಈ ವಿಷಯದಲ್ಲಿ ಪರವಾನಿಗೆಯನ್ನು ತೆಗೆದುಕೊಂಡಿರುವುದೇ ಒಂದು ಕಡೆ, ಆ ಪರವಾನಿಗೆಯ ಹೆಸರಿನಲ್ಲಿ ಬೇರೆ ಬೇರೆ ಜಾಗದಲ್ಲಿ ಯಾವ ಯಾವ ರೀತಿಯಾಗಿ ಗಣಿಗಾರಿಕೆ ನಡೆಯುತ್ತಿದೆ. ಅದರ ಬಗ್ಗೆ ಸಮಗ್ರವಾಗಿ ತನಿಖೆಯನ್ನು ನಡೆಸಿ ಇದಕ್ಕೆ ಸಂಪೂರ್ಣವಾದ ಅಂತ್ಯವನ್ನು ಕಾಣುವುದರ ಬಗ್ಗೆ ನಿರ್ಧಾರಗಳನ್ನು ಸರ್ಕಾರ ಮಾಡುವುದಕ್ಕೆ ತೀರ್ಮಾನವನ್ನು ಮಾಡುತ್ತೇವೆ.

3. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸಿನ ಸಚಿವರು) : ಮಾನ್ಯ ಅಧ್ಯಕ್ಷರೆ, ದಿನಾಂಕ : 21–03–2006ರ 1ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 42 ಪ್ರಶ್ನೆಗಳ ಪೈಕಿ 40 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಅನುಬಂಧ –1

4 ಸಭೆಯ ಮುಂದಿಡಲಾಗದ ಕಾಗದ ಪತ್ರಗಳು.

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸಿನ ಸಚಿವರು) : ಕರ್ನಾಟಕ ಮಧ್ಯಮಾವದಿ ವಿತ್ತೀಯ ಯೋಜನೆ 2005–09 ರ ಪ್ರತಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

ಶ್ರೀ ಬಿ. ಎಸ್. ಯಡಿಯೂರಪ್ಪ (ಉಪಮುಖ್ಯ ಮಂತ್ರಿಗಳು ಹಾಗೂ ಹಣಕಾಸಿನ ಸಚಿವರು) : ಭಾರತ ಸಂವಿಧಾನ 151 (2)ನೇ ಅನುಚ್ಛೇದದ ಮೇರೆಗೆ ಭಾರತದ ಲೆಕ್ಕ ನಿಯಂತ್ರಿಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಕರ್ನಾಟಕ ಸರ್ಕಾರದ ದಿನಾಂಕ : 31ನೇ ಮಾರ್ಚಿ 2005ರ ಅಂತ್ಯದವರೆಗಿನ ವಾಣಿಜ್ಯ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

I. **ಶ್ರೀ ಹೆಚ್. ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿ)** : **ಮಾನ್ಯ ಅಧ್ಯಕ್ಷರು 1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ** :

1. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

1973ರ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧಿನಿಯಮ, 39(1)ರ ಮೇರೆಗೆ :

1. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2004–05ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪರಿಶೋಧನಾ ವರದಿ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ :

1. ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತದ 2004–05ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪರಿಶೋಧನಾ ವರದಿ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 1976ರ ಕಲಂ 47(5) ರ ಪ್ರಕಾರ :

1. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕ ಪರಶೋಧನಾ ವರದಿ.

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

1995 ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧಿನಿಯಮ ಪ್ರಕರಣ 14ರ ಮೇರೆಗೆ

1. ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಬೆಂಗಳೂರಿನ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

1962ರ ಉಗ್ರಾಣ ನಿಗಮ ಕಾಯ್ದೆಯ 31(11)ರ ಪ್ರಕರಣದ ಮೇರೆಗೆ :

1. ಕರ್ನಾಟಕ ರಾಜ್ಯ ಉಗ್ರಾಣ ನಿಗಮದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

II. ಶ್ರೀ ಬಿ. ಎಸ್. ಯಡಿಯೂರಪ್ಪ (ಉಪಮುಖ್ಯಮಂತ್ರಿ) ಅವರು : ಮಾನ್ಯ ಅಧ್ಯಕ್ಷರೆ,

1951ರ ರಾಜ್ಯ ಹಣಕಾಸು ಸಂಸ್ಥೆ ಕಾಯ್ದೆ ಕಲಂ 37(7) ಮತ್ತು 38(3)ರ ಮೇರೆಗೆ

1. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ 2004–05ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

1956ರ ಕರ್ನಾಟಕ ಖಾದಿ ಮತ್ತು ಗ್ರಾಮೋದ್ಯೋಗ ಕಾಯಿದೆಯ 5(26)ರ ಮೇರೆಗೆ :

1. ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರಿನ 2001–02ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
2. ಮಾರ್ಕೆಟಿಂಗ್ ಕನ್ಸಲ್ಟೆಂಟ್ಸ್ ಅಂಡ್ ಏಜೆನ್ಸೀಸ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
3. ಕರ್ನಾಟಕ ಅಸೆಟ್ ಮ್ಯಾನೇಜ್‌ಮೆಂಟ್ ಕಂಪನಿ ನಿಯಮಿತ ಬೆಂಗಳೂರಿನ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
4. ಕರ್ನಾಟಕ ಟ್ರಸ್ಟೀ ಕಂಪನಿ ನಿಯಮಿತ ಬೆಂಗಳೂರಿನ 2004–04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
5. ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
6. ಹುಬ್ಬಳ್ಳಿಯ ಎನ್. ಜಿ. ಇ. ಎಫ್. ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
7. ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
8. ದಿ ಮೈಸೂರು ಕ್ರೋಮ್ ಟ್ಯಾನಿಂಗ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
9. ದಿ ಮೈಸೂರು ಸಕ್ಕರೆ ಕಂಪನಿ ನಿಯಮಿತದ ಮಂಡ್ಯದ 2003–04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
10. ಮೈಸೂರು ಪೇಪರ್ಸ್ ಮಿಲ್ಸ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
11. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುವುದು.

III. ಶ್ರೀ ಬಸವರಾಜು ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಪರವಾಗಿ ಉಪಮುಖ್ಯಮಂತ್ರಿಗಳು ಮಾನ್ಯ ಹಣಕಾಸಿನ ಸಚಿವರು : ಮಾನ್ಯ ಅಧ್ಯಕ್ಷರೆ,

1. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರಿನ 2003–04ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತಿದ್ದೇನೆ.

IV. ಶ್ರೀ ಸಿ. ಚನ್ನಿಗಪ್ಪ (ಅರಣ್ಯ ಮತ್ತು ಪರಿಸರ ಸಚಿವರು) : ಮಾನ್ಯ ಅಧ್ಯಕ್ಷರು,

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಮೈಸೂರು ಮ್ಯಾಚ್ ಕಂಪನಿ ಶಿವಮೊಗ್ಗದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

V. ಶ್ರೀ ಡಿ. ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) ರವರ ಪರವಾಗಿ ಮಾನ್ಯ ಉಪಮುಖ್ಯ ಮಂತ್ರಿಗಳು ಹಾಗೂ ಹಣಕಾಸಿನ ಸಚಿವರು : ಮಾನ್ಯ ಅಧ್ಯಕ್ಷರೆ,

2000ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಅಧಿನಿಯಮದ 50(2)ರ ಮೇರೆಗೆ

1. ಕುವೆಂಪು ವಿಶ್ವವಿದ್ಯಾಲಯದ 2004–05ನೇ ಸಾಲಿನ ವಾರ್ಷಿಕ ವರದಿ.
2. ಗುಲ್ಬರ್ಗಾ ವಿಶ್ವವಿದ್ಯಾಲಯದ 2004–05ನೇ ಸಾಲಿನ ವಾರ್ಷಿಕ ವರಿಗಳನ್ನು ಮಂಡಿಸುತ್ತಿದ್ದೇನೆ.

VI. ಶ್ರೀ ಎನ್. ಚೆಲುವರಾಯಸ್ವಾಮಿ (ಸಾರಿಗೆ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ 1950ರ ಅಧಿನಿಯಮ 33(2), 35ರ ಪ್ರಕರಣದ ಮೇರೆಗೆ :

1. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿಯ 2004–05ನೇ ಸಾಲಿನ ವಾರ್ಷಿಕ ಆಡಳಿತ ವರದಿ.
2. ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಗುಲ್ಬರ್ಗಾದ 2004–05ನೇ ಸಾಲಿನ ವಾರ್ಷಿಕ ಆಡಳಿತ ವರದಿಗಳನ್ನು ಮಂಡಿಸುವುದು.

VII. ಶ್ರೀ ಸಿ. ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಪರವಾಗಿ ಉಪಮುಖ್ಯಮಂತ್ರಿಗಳು ಹಾಗೂ ಹಣಕಾಸಿನ ಸಚಿವರು: ಮಾನ್ಯ ಅಧ್ಯಕ್ಷರೆ,

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 262(3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ :

1. ಚಿತ್ರದುರ್ಗ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ವರದಿ ಹಾಗೂ 2003–04ನೇ ಸಾಲಿನ ಲೆಕ್ಕಪತ್ರಗಳ ವರದಿ.

2. ಬಳ್ಳಾರಿ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಗಳು ಮತ್ತು ಲೆಕ್ಕಪರಿಶೋಧನಾ ವರದಿ.

3. ಶಿವಮೊಗ್ಗ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಲೆಕ್ಕಗಳು ಮತ್ತು ಲೆಕ್ಕಪರಿಶೋಧನಾ ವರದಿ.

4. ಚಿಕ್ಕಮಗಳೂರು ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಆಡಳಿತ ವರದಿ.

5. ಧಾರವಾಡ ಜಿಲ್ಲಾ ಪಂಚಾಯತ್‌ನ 2004–05ನೇ ಸಾಲಿನ ವಾರ್ಷಿಕ ಆಡಳಿತ ವರದಿ.

6. ರಾಯಚೂರು ಜಿಲ್ಲಾ ಪಂಚಾಯತ್‌ನ 2002–03ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ಹಾಗೂ ತನಿಖಾ ವರದಿ.

7. ಬಳ್ಳಾರಿ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಲೆಕ್ಕಗಳು ಮತ್ತು ಲೆಕ್ಕಪರಿಶೋಧನಾ ವರದಿ.

1953ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಭೂ ಸೇನಾ ನಿಗಮ ನಿಯಮಿತದ 2003–04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

VIII. ಶ್ರೀ ಬಂಡೆಪ್ಪ ಕಾಶೆಂಪೂರ್ (ಕೃಷಿ ಸಚಿವರು) ಅವರು :

1953ರ ಕೃಷಿ ವಿಶ್ವವಿದ್ಯಾನಿಲಯದ ಕಾಯ್ದೆ ಕಲಂ 38(3)ರ ಮೇರೆಗೆ :

1. ಕೃಷಿ ವಿಶ್ವವಿಧ್ಯಾಲಯ, ಗಾಂಧಿ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರಿನ 2003–04ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

2. ಕೃಷಿ ವಿಶ್ವವಿದ್ಯಾಲಯ, ಧಾರವಾಡದ 2003–04ನೇ ಸಾಲಿನ ವಾರ್ಷಿಕ ವರದಿ.

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಸ್ಟೇಟ್ ಆಗ್ರೋ ಕಾರ್ನ್ ಪ್ರಾಡೆಕ್ಟ್ಸ್ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

2. ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನಿಯಮಿತದ 2004–05ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಎಲ್ಲಾ ಕಾಗದ ಪತ್ರಗಳನ್ನು ಮಂಡಿಸಲಾಯಿತು.

ಅಧ್ಯಕ್ಷರು : ಮಾನ್ಯ ಉದಾಸಿಯವರು.

ಶ್ರೀಜಿ.ಸಿ.ಮಾಧುಸ್ವಾಮಿ : ಅವರ ಹೆಸರಿನ ಮುಂದೆ ಏನು ಪ್ರಸ್ತಾಪ ವಾಗಿದೆ ಅದನ್ನು ಹೇಳಲಿ ಸಾರ್.